Akashvani : Bangalore
Regional Bulletin In Kannada
14.09.2026 / 14.30 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಬರದ ಪರಿಣಾಮವನ್ನು ಸಮಗ್ರವಾಗಿ ಅಳೆಯುವ ವ್ಯವಸ್ಥೆ ಅಗತ್ಯ - ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಅಭಿಮತ
- ರಾಜ್ಯಾದ್ಯಂತ ಇಂದು ಸಡಗರ-ಸಂಭ್ರಮದಿಂದ ಗೌರಿ ಗಣೇಶ ಹಬ್ಬ ಆಚರಣೆ; ಸಾರ್ವತ್ರಿಕ ಗಣೇಶ ಉತ್ಸವಗಳಲ್ಲಿ ಧಾರ್ಮಿಕ-ಸಾಂಸ್ಕೃತಿಕ ಕಾರ್ಯಕ್ರಮಗಳ ಆಯೋಜನೆ
- ಮೈಸೂರಿನಲ್ಲಿ ಗಣೇಶ ಹಬ್ಬದ ಅಂಗವಾಗಿ ದಸರಾ ಗಜಪಡೆಗೆ ಪೂಜೆ ಸಲ್ಲಿಕೆ
- ಸಾರಿಗೆ ಇಲಾಖೆ ಅಭಿವೃದ್ಧಿಗೆ ೭ ಸಾವಿರ ಕೋಟಿ ರೂಪಾಯಿ ಅನುದಾನಕ್ಕೆ ಮುಖ್ಯಮಂತ್ರಿ ಅನುಮೋದನೆ; ಸಚಿವ ಭೈರತಿ ಸುರೇಶ್

<><*<><>*><>

ಕರ್ನಾಟಕದಂತಹ ಕೃಷಿ ಅವಲಂಬಿತ ರಾಜ್ಯಗಳಲ್ಲಿ ಬರದ ಪರಿಣಾಮವನ್ನು ಸಮಗ್ರವಾಗಿ ಅಳೆಯುವ ವ್ಯವಸ್ಥೆ ಅಗತ್ಯವಾಗಿದೆ ಎಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಹೇಳಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮ ಪೋಸ್ಟ್ ಮಾಡಿರುವ ಉಪಮುಖ್ಯಮಂತ್ರಿಗಳು, ರಾಜ್ಯದಲ್ಲಿ ಬದಲಾಗುತ್ತಿರುವ ಬರ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಕೇಂದ್ರ ಸರ್ಕಾರ ಬರ ಪರಿಹಾರದ ಮಾನದಂಡಗಳನ್ನು ಮರುಪರಿಶೀಲಿಸುವ ಅಗತ್ಯವಿದೆ. ಮಳೆಯ ಕೊರತೆ, ಬೆಳೆ ನಷ್ಟ, ಒಣಹವೆ ಹಾಗೂ ಸ್ಥಳೀಯ ಪರಿಸ್ಥಿತಿಗಳ ವಾಸ್ತವ ಪರಿಣಾಮಗಳನ್ನು ವೈಜ್ಞಾನಿಕವಾಗಿ ಅರ್ಥೈಸುವುದು ಮುಖ್ಯ ಎಂದು ಅಭಿಪ್ರಾಯಪಟ್ಟಿದ್ದಾರೆ. ಪ್ರಸ್ತುತ ಮಾನದಂಡಗಳು ಬದಲಾಗುತ್ತಿರುವ ಹವಾಮಾನ ಪರಿಸ್ಥಿತಿಯಲ್ಲಿ ರೈತರ ನೈಜ ಸಂಕಷ್ಟವನ್ನು ಸಂಪೂರ್ಣವಾಗಿ ಪ್ರತಿಬಿಂಬಿಸುತ್ತಿವೆಯೇ ಎಂಬುದನ್ನು ಪರಿಶೀಲಿಸಬೇಕಿದೆ. ರಾಷ್ಟ್ರೀಯ ವಿಪತ್ತು ಪರಿಹಾರ ನಿಧಿಯ ಮಾರ್ಗಸೂಚಿಗಳ ಪರಿಷ್ಕರಣೆ ಕುರಿತು ರಾಜ್ಯದ ವಾಸ್ತವಾಂಶಗಳನ್ನು ಪರಿಗಣಿಸಿ ಸೂಕ್ತ ನಿರ್ಧಾರ ಕೈಗೊಳ್ಳುವುದು ಅಗತ್ಯ ಎಂದು ತಿಳಿಸಿದ್ದಾರೆ.

<><*<><>*><>

ರಾಜ್ಯಾದ್ಯಂತ ಇಂದು ಗೌರಿ ಗಣೇಶ ಹಬ್ಬವನ್ನು ಶ್ರದ್ಧಾಳುಗಳು ಸಡಗರ-ಸಂಭ್ರಮದಿಂದ ಆಚರಿಸುತ್ತಿದ್ದಾರೆ. ವಿವಿಧ ಸಂಘ-ಸಂಸ್ಥೆಗಳು ನಡೆಸುತ್ತಿರುವ ಸಾರ್ವಜನಿಕ ಗಣಪತಿ ಉತ್ಸವಗಳಿಗೂ ಭರದ ಸಿದ್ಧತೆ ನಡೆಯುತ್ತಿದೆ. ಶಿವಮೊಗ್ಗ ಜಿಲ್ಲೆಯಲ್ಲಿ ಕೇಂದ್ರ ಬಿಂದು ಹಿಂದೂ ಮಹಾಸಭಾ ಗಣಪತಿ ಉತ್ಸವದ ೮೧ನೇ ವರ್ಷದ ಆಚರಣೆಗೆ ಅಂತಿಮ ಹಂತದ ಸಿದ್ಧತೆ ನಡೆಯುತ್ತಿದೆ. ಗಣೇಶೋತ್ಸವದ ಅಂಗವಾಗಿ ಇದಿನಿಂದ ಇದೇ ೧೫ರವರೆಗೆ ವಿವಿಧ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಗೌರಿ-ಗಣೇಶ ಹಬ್ಬದ ಹಿನ್ನೆಲೆಯಲ್ಲಿ ಶಿವಮೊಗ್ಗ ನಗರದಲ್ಲಿ ಪೊಲೀಸ್ ರೂಟ್ ಮಾರ್ಚ್ ನಡೆಸಿದರು. ಹಬ್ಬದ ಅಂಗವಾಗಿ ಸಾರ್ವಜನಿಕರಲ್ಲಿ ವಿಶ್ವಾಸ ಮೂಡಿಸುವ ಹಿನ್ನೆಲೆಯಲ್ಲಿ ಪಥ ಸಂಚಲನ ನಡೆಸಲಾಯಿತು. ಈ ಕುರಿತು ಮಾತನಾಡಿರುವ ಶಿವಮೊಗ್ಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ನಿಖಿಲ್, ಜಿಲ್ಲಾದ್ಯಂತ ೩ ಸಾವಿರದ ೯೪೭ ಗಣಪತಿ ಪ್ರತಿಷ್ಠಾಪನೆಯಾಗಲಿದೆ ಎಂದು ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮದ ಮೇಲೂ ಕಣ್ಣಿಡಲಾಗಿದ್ದು, ಇದಕ್ಕಾಗಿ ಪ್ರತಿ ಪೊಲೀಸ್ ಠಾಣೆಯಲ್ಲೂ ತಜ್ಞ ಸಿಬ್ಬಂದಿ ನಿಯೋಜಿಸಲಾಗಿದೆ ಎಂದು ಜಿಲ್ಲಾ ಪೊಲೀಶ್ ವರಿಷ್ಠರು ತಿಳಿಸಿದ್ದಾರೆ. ದಾವಣಗೆರೆ ಜಿಲ್ಲಾದ್ಯಂತ ಈ ಬಾರಿ ಒಟ್ಟು ೧ ಸಾವಿರದ ೫೯೧ ಸಾರ್ವಜನಿಕ ಗಣೇಶ ಮೂರ್ತಿಗಳ ಪ್ರತಿಷ್ಠಾಪನೆಗೆ ಜಿಲ್ಲಾಡಳಿತ ಅಧಿಕೃತ ಅನುಮತಿ ನೀಡಿದೆ. ಮೂರ್ತಿ ವಿಸರ್ಜನೆ ವೇಳೆಯಲ್ಲಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ದಾವಣಗೆರೆ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ೪೦ಕ್ಕೂ ಹೆಚ್ಚು ಸಂಚಾರಿ ವಿಸರ್ಜನಾ ವಾಹನಗಳ ವ್ಯವಸ್ಥೆ ಮಾಡಲಾಗಿದೆ ಎಂದು ಪಾಲಿಕೆ ಆಯುಕ್ತ ಡಾ.ಮಹಾಂತೇಶ್ ತಿಳಿಸಿದ್ದಾರೆ. ಪರಿಸರ ಸ್ನೇಹಿ ಗಣೇಶೋತ್ಸವ ಆಚರಣೆಗೆ ಒತ್ತು ನೀಡಲಾಗಿದ್ದು, ಸಾರ್ವಜನಿಕರು ಹಾಗೂ ಗಣೇಶ ಮಂಡಳಿಯವರು ನಿಗದಿತ ಸ್ಥಳಗಳಲ್ಲಿ ಅಥವಾ ಸಂಚಾರಿ ವಾಹನಗಳಲ್ಲೇ ಮೂರ್ತಿಗಳನ್ನು ವಿಸರ್ಜಿಸುವ ಮೂಲಕ ಸಹಕರಿಸಬೇಕು ಎಂದು ಮನವಿ ಮಾಡಿದ್ದಾರೆ.

ಉತ್ತರಕನ್ನಡ ಜಿಲ್ಲೆಯಾದ್ಯಂತ ಗಣೇಶ ಚತುರ್ಥಿಯನ್ನು ಅತ್ಯಂತ ಸಂಭ್ರಮ, ಸಡಗರದಿಂದ ಆಚರಿಸಲಾಗುತ್ತಿದೆ. ಜಿಲ್ಲೆಯ ವಿವಿಧೆಡೆ ಮನೆ, ದೇವಾಲಯ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಗಣಪತಿ ಮೂರ್ತಿಗಳನ್ನು ಪ್ರತಿಷ್ಠಾಪನೆ ಮಾಡಲಾಗಿದೆ. ವಿಘ್ನ ನಿವಾರಕ ಗಣಪನ ಆರಾಧನೆಗೆ ಭಕ್ತರು ಸಜ್ಜಾಗಿದ್ದಾರೆ. ಪುರಾಣ ಪ್ರಸಿದ್ಧ ಹೊನ್ನಾವರದ ಇಡಗುಂಜಿ ಮಹಾಗಣಪತಿ ದೇವಸ್ಥಾನ ಹಾಗೂ ಗೋಕರ್ಣದ ಮಹಾಗಣಪತಿ ದೇವಸ್ಥಾನದಲ್ಲಿ ವಿಶೇಷ ಪೂಜಾ ಕಾರ್ಯಕ್ರಮಗಳು ನಡೆಯುತ್ತಿದೆ. ಇನ್ನು ಬೆಳಗ್ಗೆಯಿಂದಲೇ ದೇವಸ್ಥಾನಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸಿ, ವಿಘ್ನ ನಿವಾರಕನ ದರ್ಶನ ಪಡೆಯುತ್ತಿದ್ದಾರೆ. ವಿಶೇಷ ಪೂಜೆ, ನೈವೇದ್ಯ ಹಾಗೂ ವಿವಿಧ ಧಾರ್ಮಿಕ ಆಚರಣೆಗಳು ನಡೆಯುತ್ತಿದೆ. ಜಿಲ್ಲೆಯ ವಿವಿಧೆಡೆಯಿಂದ ಭಕ್ತರು ಕ್ಷೇತ್ರಗಳಿಗೆ ಭೇಟಿ ನೀಡುತ್ತಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯಲ್ಲಿ ಪ್ರಸಿದ್ಧ ಶೃಂಗೇರಿಯ ತೋರಣ ಗಣಪತಿ ಸೇರಿ ಜಿಲ್ಲೆಯ ಗಣೇಶನ

ದೇವಾಲಯಗಳಲ್ಲಿ ವಿಶೇಷ ಪೂಜಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು ಭಕ್ತರು ಮುಂಜಾನೆಯಿಂದಲ್ಲೆ ಭೇಟಿ ನೀಡಿ ದೇವರ ದರ್ಶನ ಪಡೆದುಕೊಳ್ಳುತ್ತಿದ್ದಾರೆ. ಯಾದಗಿರಿ ಜಿಲ್ಲೆಯಲ್ಲಿ ಒಟ್ಟು ೧ ಸಾವಿರದ ೧೮೧ ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸಲಾಗುತ್ತಿದ್ದು, ನಗರ ವ್ಯಾಪ್ತಿಯಲ್ಲೇ ೫೧ ಮೂರ್ತಿಗಳು ಪ್ರತಿಷ್ಠಾಪನೆಯಾಗಲಿವೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್ ತಿಳಿಸಿದ್ದಾರೆ. ವಿಸರ್ಜನಾ ಮೆರವಣಿಗೆಗಳು ನಿಗದಿತ ದಿನದಂದು ಸಾಧ್ಯವಾದಷ್ಟು ಬೇಗ ಆರಂಭವಾಗಿ ರಾತ್ರಿ ೧೧ ಗಂಟೆಯೊಳಗೆ ಪೂರ್ಣಗೊಳ್ಳಬೇಕು ಮನವಿ ಮಾಡಿದ್ದಾರೆ. ಸಕ್ಕರೆನಾಡು ಮಂಡ್ಯದಲ್ಲಿ ಗೌರಿ- ಗಣೇಶ ಹಬ್ಬ ರಂಗೇರಿದೆ. ಜಿಲ್ಲೆಯಲ್ಲಿ ಕನಿಷ್ಟ ೩ ಸಾವಿರಕ್ಕೂ ಅಧಿಕ ಗಣೇಶ ಮೂರ್ತಿ ಪ್ರತಿಷ್ಟಾಪನೆ ಮಾಡಿದ್ದು, ಯುವಕರು ಶ್ರದ್ಧಾ ಭಕ್ತಿಯಿಂದ ಗಣೇಶಮೂರ್ತಿ ಪ್ರತಿಷ್ಟಾಪನೆ ಮಾಡಿ ಪೂಜೆ ಸಲ್ಲಿಸಿದ್ದಾರೆ. ಮತ್ತೊಂದೆಡೆ ಗೌರಿ ಹಬ್ಬವು ಸಹ ಇಂದೇ ಬಿದ್ದಿರುವುದರಿಂದ ಮಹಿಳೆಯರು ಹಾಗೂ ಯುವತಿಯರು ಗೌರಿ ಹಬ್ಬ ಆಚರಿಸಿ, ಹುತ್ತಕ್ಕೆ ಹಾಲೆರೆದು ಪೂಜೆ ಸಲ್ಲಿಸುತ್ತಿದ್ದಾರೆ.

<><*<><>*><>

ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಗಣಪತಿ ಉತ್ಸವದ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಹಾಗೂ ಅರಣ್ಯ ಇಲಾಖೆಯ ಸಂಯುಕ್ತವಾಗಿ ಅಂಬವಿಲಾಸ ಅರಮನೆ ಆವರಣದಲ್ಲಿ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ವಿಶ್ವವಿಖ್ಯಾತ ನಾಡಹಬ್ಬ ದಸರಾ ಮಹೋತ್ಸವದ ಜಂಬೂ ಸವಾರಿಯಲ್ಲಿ ಪಾಲ್ಗೊಳ್ಳುವ ಗಜಪಡೆಗೆ ವಿಶೇಷ ಪೂಜೆ ಸಲ್ಲಿಸಲಾಯಿತು. ಆನೆಗಳಾದ ಧನಂಜಯ, ಗೋಪಿ, ಮಹೇಂದ್ರ, ಏಕಲವ್ಯ, ಕಾವೇರಿ, ಚೈತ್ರ, ಶ್ರೀಕಂಠ, ಆನೆಗಳು ಸೇರಿದಂತೆ ಒಟ್ಟು ೧೨ ಆನೆಗಳಿಗೆ ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ ಪೂಜೆ ನರವೇರಿಸಿದರು. ನಂತರ ಮಾತನಾಡಿದ ಅವರು, ದಸರಾ ಆನೆಗಳಿಗೆ ಜಿಲ್ಲಾಡಳಿತ ಮತ್ತು ಅರಣ್ಯ ಇಲಾಖೆ ವತಿಯಿಂದ ವಿಶೇಷ ಪೂಜೆ ಸಲ್ಲಿಸಲಾಯಿತು. ನಾಡಿಗೆ ಸಂತೋಷ, ಸಮೃದ್ಧಿ ಹಾಗೂ ಉತ್ತಮ ಮಳೆಯಾಗಲಿ. ದಸರಾ ಉತ್ಸವ ಸುಸೂತ್ರವಾಗಿ ನಡೆಯಲಿ ಎಂದು ಪ್ರಾರ್ಥಿಸಿರುವುದಾಗಿ ತಿಳಿಸಿದ್ದಾರೆ.

ಧ್ವನಿ; ಲಕ್ಷ್ಮೀಕಾಂತ ರೆಡ್ಡಿ ( ೧೮ ಸೆಕೆಂಡ್ಸ್)

<><*<><>*><>

ಉತ್ತರ ಕನ್ನಡ ಜಿಲ್ಲೆಯಾದ್ಯಂತ ಒಟ್ಟು ೧ ಸಾವಿರದ ೪೯೨ ಸಾರ್ವಜನಿಕ ಗಣೇಶ ಮೂರ್ತಿಗಳ ಪ್ರತಿಷ್ಠಾಪನೆ ನಡೆಯುತ್ತಿದ್ದು, ಹಬ್ಬದ ಸಂದರ್ಭದಲ್ಲಿ ಕಟ್ಟುನಿಟ್ಟಿನ ಭದ್ರತಾ ವ್ಯವಸ್ಥೆ ರೂಪಿಸಲಾಗಿದೆ ಎಂದು ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ದೀಪನ್ ಎಂ.ಎನ್ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಇಂದು ಸ್ವರ್ಣಗೌರಿ ವ್ರತ ಹಾಗೂ ಗಣೇಶ ಚತುರ್ಥಿಯನ್ನು ಶ್ರದ್ಧಾ ಭಕ್ತಿ

ಸಂಭ್ರಮಗಳಿಂದ ಆಚರಿಸಲಾಗುತ್ತಿದೆ. ಜಿಲ್ಲೆಯ ದೊಡ್ಡಬಳ್ಳಾಪುರ, ದೇವನಹಳ್ಳಿ, ಹೊಸಕೋಟೆ, ನೆಲಮಂಗಲ ತಾಲೂಕಿನಲ್ಲಿ ಸ್ವರ್ಣಗೌರಿ ವ್ರತದ ಅಂಗವಾಗಿ ಮನೆಗಳನ್ನು ತಳಿರು ತೋರಣಗಳಿಂದ ಸಿಂಗರಿಸಲಾಗಿದ್ದು, ಮಂಟಪದಲ್ಲಿ ಗೌರಿಯ ಮೂರ್ತಿಯನ್ನು ಪ್ರತಿಷ್ಠಾಪಿಸಿ ಪೂಜೆ ಸಲ್ಲಿಸಿ, ಸುಮಂಗಲಿಯರಿಗೆ ಬಾಗಿನ ನೀಡುವುದು ಹಬ್ಬದ ಪ್ರಮುಖ ಆಚರಣೆಯಾಗಿದೆ. ಸುಮಂಗಲಿಯರು ಮನೆ ಮುಂದೆ ರಂಗೋಲಿ ಹಾಕಿ, ಗೌರಿಗೆ ವಿಶೇಷ ಅಲಂಕಾರವನ್ನು ಮಾಡಿ ಪೂಜೆ ಸಲ್ಲಿಸಿ ವ್ರತಾಚರಣೆ ಕೈಗೊಂಡಿದ್ದರು. ಗಣೇಶ ದೇವಾಲಯಗಳಲ್ಲಿ ವಿಶೇಷ ಅಲಂಕಾರ, ಪೂಜಾ ಕಾರ್ಯಕ್ರಮಗಳು ನಡೆಯುತ್ತಿವೆ. ಸಾರ್ವಜನಿಕ ಸ್ಥಳಗಳಲ್ಲಿ ಪೆಂಡಾಲ್ ಹಾಕಿ ವಿವಿಧ ಮಾದರಿಯ ಗಣೇಶ ಮೂರ್ತಿಗಳನ್ನು ಕೂಡಿಸಿ ಪೂಜೆ ಸಲ್ಲಿಸಲಾಗುತ್ತಿದೆ. ಗಣೇಶ ಚತುರ್ಥಿಯಂದು ದೊಡ್ಡಬಳ್ಳಾಪುರದಲ್ಲಿ ನೇಕಾರ ಸಮುದಾಯ ಸಗಣಿಯಲ್ಲಿ ಪಿಳ್ಳೆರಾಯನ್ನು ಪ್ರತಿಷ್ಠಾಪಿಸಿ, ಮಗ್ಗಗಳಿಗೆ ಪೂಜೆ ಸಲ್ಲಿಸುವ ಆಚರಣೆ ವಿಶೇಷವಾಗಿದೆ. ದೊಡ್ಡಬಳ್ಳಾಪುರ ನಗರಸಭೆಯಿಂದ ಪರಿಸರಸ್ನೇಹಿಯಾಗಿ ಗಣೇಶೋತ್ಸವ ಆಚರಿಸುವಂತೆ ಪ್ರಚಾರ ಕೈಗೊಳ್ಳಲಾಗಿದೆ. ಗಣೇಶ ಮೂರ್ತಿಗಳನ್ನು ಕೆರೆ, ಕುಂಟೆ ಮೊದಲಾದ ಜಲಮೂಲಗಳ ನೀರಿನಲ್ಲಿ ವಿಸರ್ಜನೆ ಮಾಡದಂತೆ ಸೂಚಿಸಲಾಗಿದ್ದು, ನಗರಸಭೆ ವತಿಯಿಂದ ಗಣೇಶಮೂರ್ತಿ ವಿಸರ್ಜನೆಗೆ ತಾತ್ಕಾಲಿಕ ಹೊಂಡ ಹಾಗೂ ಡ್ರಮ್‌ಗಳನ್ನಳಗೊಂಡ ವಾಹನಗಳ ವ್ಯವಸ್ಥೆ ಮಾಡಲಾಗಿದೆ. ಕೋಲಾರ ಜಿಲ್ಲೆಯಾದ್ಯಂತ ಗೌರಿ-ಗಣೇಶ ಚತುರ್ಥಿಯ ಸಂಭ್ರಮ ಕಳೆಗಟ್ಟಿದ್ದು, ಇಂದು ಪ್ರತಿಯೊಂದು ಮನೆ ಹಾಗೂ ಸಾರ್ವಜನಿಕ ಪೆಂಡಾಲ್ ಗಳಲ್ಲಿ ವಿಘ್ನನಿವಾರಕ ವಿನಾಯಕನನ್ನು ಭಕ್ತಿ-ಶ್ರದ್ಧೆಯಿಂದ ಪ್ರತಿಷ್ಠಾಪಿಸಿ ವಿಶೇಷ ಪೂಜೆ ಸಲ್ಲಿಸಲಾಗುತ್ತಿದೆ. ಜಿಲ್ಲೆಯ ಪ್ರಸಿದ್ಧ ಧಾರ್ಮಿಕ ಕ್ಷೇತ್ರವಾದ ಮುಳಬಾಗಿಲು ತಾಲೂಕಿನ ಕುರುಡುಮಲೆ ಮಹಾಗಣಪತಿ ದೇವಾಲಯದಲ್ಲಿ ಇಂದು ವಿಶೇಷ ಪೂಜಾ ಕೈಂಕರ್ಯಗಳು ಜರುಗುತ್ತಿವೆ. ತ್ರಿಮೂರ್ತಿಗಳಿಂದ ಪ್ರತಿಷ್ಠಾಪಿತ ಎನ್ನಲಾದ ಹದಿಮೂರುವರೆ ಅಡಿ ಎತ್ತರದ ಏಕಶಿಲಾ ಸಾಲಿಗ್ರಾಮ ಗಣೇಶನಿಗೆ ಬೆಳಗಿನ ಜಾವದಿಂದಲೇ ಮಹಾ ಅಭಿಷೇಕ, ಸಹಸ್ರನಾಮ ಅರ್ಚನೆ ನೆರವೇರಿಸಲಾಗುತ್ತಿದೆ. ಹಬ್ಬದ ಪ್ರಯುಕ್ತ ಐದು ದಿನಗಳ ಕಾಲ ನಡೆಯುವ ಬ್ರಹ್ಮರಥೋತ್ಸವ ಮತ್ತು ಲಕ್ಷ್ಮೀ ಗಣಪತಿ ಉತ್ಸವಗಳಿಗೆ ಚಾಲನೆ ಸಿಕ್ಕಿದ್ದು, ಸಾವಿರಾರು ಭಕ್ತರು ಸಾಲಿನಲ್ಲಿ ನಿಂತು ದರ್ಶನ ಪಡೆಯುತ್ತಿದ್ದಾರೆ.

<><*<><>*><>

ರಾಜ್ಯ ಸರ್ಕಾರ, ಸಾರಿಗೆ ಇಲಾಖೆಗೆ ೭ ಸಾವಿರ ಕೋಟಿ ರೂಪಾಯಿಗಳ ಅನುದಾನವನ್ನು ಮಂಜೂರು ಮಾಡಿದೆ ಎಂದು ಸಾರಿಗೆ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ. ಮಂಡ್ಯ ಜಿಲ್ಲೆಯ ಕನ್ನಾಘಟ್ಟ ಗ್ರಾಮದಲ್ಲಿ ಮಹಾಗಣಪತಿ ಪ್ರತಿಷ್ಠಾಪನಾ ಮಹೋತ್ಸವ ಮತ್ತು ನೂತನ ದೇವಾಲಯದ ಲೋಕಾರ್ಪಣ ಮಹೋತ್ಸವದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಸಾರಿಗೆ ಇಲಾಖೆಯ ಅಭಿವೃದ್ಧಿಗೆ ಒಟ್ಟು ೭ ಸಾವಿರ ಕೋಟಿ ರೂಪಾಯಿ ಅನುದಾನವನ್ನು ನೀಡಲು ಮುಖ್ಯಮಂತ್ರಿಗಳು ಅನುಮೋದನೆ ನೀಡಿದ್ದಾರೆ. ಇದಿಷ್ಟೇ ಅಲ್ಲದೇ, ೧ ಸಾವಿರ ಬಸ್‌ಗಳನ್ನು ಖರೀದಿ ಮಾಡಲು ಹಸಿರು ನಿಶಾನೆ ತೋರಿದ್ದಾರೆ ಎಂದು ತಿಳಿಸಿದರು. ರಾಜ್ಯದ ಬಸ್ ನಿಲ್ದಾಣಗಳ ಉನ್ನತೀಕರಣಕ್ಕೆ ಕೇಂದ್ರ ಸರ್ಕಾರದಿಂದ ೨ ಸಾವಿರ ಕೋಟಿ ರೂಪಾಯಿ ಪಡೆಯಲೂ ಸಮ್ಮತಿ ಸೂಚಿಸಿರುವುದು ಸಂತಸದ ವಿಚಾರವಾಗಿದೆ ಎಂದರು.

<><*<><>*><>

ಚಿಕ್ಕಮಗಳೂರು ಜಿಲ್ಲೆ ಗುಂಡ್ಲುಪೇಟೆ ತಾಲೂಕಿನ ಕೋಟೆಕೆರೆ ಗ್ರಾಮದಲ್ಲಿ ಇಂದು ಮುಂಜಾನೆ ಕಾಡಾನೆ ದಾಳಿಗೆ ಸಿಲುಕಿ ಓರ್ವ ರೈತ ಮೃತಪಟ್ಟಿದ್ದಾರೆ.

<>><>< ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು ><><<>

<>><><ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ ><><<>